## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/893/ಗ್ರಾಪಂಅ/2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:21-08-2018.

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

ಇವರಿಗೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

ಮಾನ್ಯರೆ,

**ವಿಷಯ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ನಿಯಮಗಳು 2017ರ ನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 893 ಗ್ರಾಪಂಅ 2016 ದಿನಾಂಕ: 06-06-2018.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ನಿಯಮಗಳು 2017 ನ್ನು ರಚಿಸಲಾಗಿದ್ದು, ಇದರೊಂದಿಗೆ ಲಗತ್ತಿಸಿ ಕಳುಹಿಸಿದೆ. ಉಲ್ಲೇಖಿತ ಅಧಿಸೂಚನೆಯನ್ವಯ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ನಿಯಮಗಳು 2017 ರ ನಿಯಮ 5 ರನ್ವಯ ಐದು ಸಾವಿರ ರೂಪಾಯಿಗಳ ಮೌಲ್ಯವನ್ನು ಮೀರುವ ಯಾವುದೇ ಸ್ಥಿರ ಸ್ವತ್ತಿನ ಗುತ್ತಿಗೆ, ಮಾರಾಟ ಅಥವಾ ಇತರ ವರ್ಗಾವಣೆ ಮಾಡಲು ಗ್ರಾಮ ಪಂಚಾಯತಿಗಳು ಸರ್ಕಾರದ ಪೂರ್ವಾನುಮೋದನೆಯನ್ನು ಪಡೆಯಬೇಕಾಗಿರುತ್ತದೆ. ಈ ನಿಯಮಗಳನ್ವಯ ಕ್ರಮ ವಹಿಸುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

21/8

**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

21/8

**ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ**

1) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
2) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
3) ಕಛೇರಿ ಪ್ರತಿ

4. ನಿಯಮ 5ರ ತಿದ್ದುಪಡಿ:- ಮೂಲ ನಿಯಮಗಳ, ನಿಯಮ 5 ರಲ್ಲಿ "ತಾಲ್ಲೂಕು ಪಂಚಾಯತಿಯ" ಎಂಬ ಪದಗಳ ಬದಲಾಗಿ "ಸರ್ಕಾರದ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

PR – 597

SC - 500

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಮುಬಾರಕ್ ಅಹ್ಮದ್

ಉಪ ನಿರ್ದೇಶಕರು ಹಾಗೂ ಪದನಿಮಿತ್ತ

ಸರ್ಕಾರದ ಅಧೀನ ಕಾರ್ಯದರ್ಶಿ,

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ : ಗ್ರಾಅಪ 702 ಗ್ರಾಪಂಅ 2016, ಬೆಂಗಳೂರು, ದಿನಾಂಕ:06-06-2018.**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ ಪ್ರಕರಣ 3-ಇ ರೊಂದಿಗೆ ಓದಿಕೊಂಡಂತೆ ಪ್ರಕರಣ 311 ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ಕರಡನ್ನು ಸದರಿ ಅಧಿನಿಯಮದ ಪ್ರಕರಣ 311ನೇ ಪ್ರಕರಣದ, ಉಪ ಪ್ರಕರಣ (1) ರ ಅಡಿಯಲ್ಲಿ ಅಗತ್ಯಪಡಿಸಲಾದಂತೆ, ಅದರಿಂದ ಬಾಧಿತರಾಗಬಹುದಾದ ವ್ಯಕ್ತಿಗಳ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಲಾಗಿದೆ ಮತ್ತು ಸದರಿ ಕರಡು ನಿಯಮಗಳನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿತವಾದ ದಿನಾಂಕದಿಂದ ಮೂವತ್ತು ದಿನಗಳ ನಂತರ ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ಸೂಚಿಸಲಾಗಿದೆ.

ಮೇಲೆ ನಿರ್ದಿಷ್ಟಪಡಿಸಿದ ಅವಧಿಗೆ ಮುಕ್ತಾಯವಾಗುವುದಕ್ಕೆ ಮೊದಲು ಕರಡು ನಿಯಮಗಳಿಗೆ ಸಂಬಂಧಿಸಿದಂತೆ, ಯಾವೊಬ್ಬ ವ್ಯಕ್ತಿಯಿಂದ ರಾಜ್ಯ ಸರ್ಕಾರವು ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆ ಅಥವಾ ಸಲಹೆಗಳನ್ನು ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, 3ನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀದಿ, ಬೆಂಗಳೂರು-01 ಇವರಿಗೆ ಕಳುಹಿಸಲು ಕೋರಲಾಗಿದೆ:

### ಕರಡು ನಿಯಮಗಳು

1. **ಹೆಸರು ಮತ್ತು ಪ್ರಾರಂಭ**-(1) ಈ ನಿಯಮಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್, (ಗ್ರಾಮ ಪಂಚಾಯತಿಯಲ್ಲಿ ಅನುಷ್ಠಾನಗೊಳ್ಳುವ ಅಭಿವೃದ್ಧಿ ಕಾರ್ಯಕ್ರಮಗಳ ಮತ್ತು ಸರ್ಕಾರಿ ಯೋಜನೆಗಳನ್ನು ಅನುಷ್ಠಾನಕ್ಕೆ ತರುವುದರ ಮೇಲ್ವಿಚಾರಣೆ) ನಿಯಮಗಳು, 2018 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿತವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ಪರಿಭಾಷೆಗಳು**- ಈ ನಿಯಮಗಳ ವಿಷಯಕ್ಕೆ ಅಥವಾ ಸಂದರ್ಭಕ್ಕೆ ಬೇರೆ ಅರ್ಥದ ಅಗತ್ಯ ಇರದಿದ್ದರೆ-

(ಎ). "ಅಧಿನಿಯಮ" ಎಂದರೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ 14):

(ಬಿ) "ಅಧ್ಯಕ್ಷರು" ಎಂದರೆ ಗ್ರಾಮ ಸಭೆಯ ಅಧ್ಯಕ್ಷತೆಯನ್ನು ಯಾರು ವಹಿಸುತ್ತಾರೊ ಅಂತಹ ಗ್ರಾಮ ಪಂಚಾಯತಿಯ ಸದಸ್ಯ.

(ಸಿ) "ಗ್ರಾಮ ಸಭೆಯ ಸದಸ್ಯರು" ಎಂದರೆ ಸಂಬಂಧಿತ ಗ್ರಾಮ ಪಂಚಾಯತಿ ಮತದಾರರ ಪಟ್ಟಿಯಲ್ಲಿ ನೊಂದಾಯಿತ ವ್ಯಕ್ತಿಗಳು.

(ಡಿ) "ಗ್ರಾಮ" ಎಂದರೆ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಬರುವ ಹಳ್ಳಿಯ ಪ್ರದೇಶಗಳು.

(ಇ) **"ಮೇಲ್ವಿಚಾರಣಾ ಸಮಿತಿ"** ಎಂದರೆ ನಿಯಮ 3 ರಲ್ಲಿ ಸ್ಥಾಪಿತವಾದ ಸಮಿತಿ ಮತ್ತು ಇದು ಸರ್ಕಾರವು ಅಥವಾ ಗ್ರಾಮ ಪಂಚಾಯತಿಯು ನಿಯಮಿಸುವ ಉಪ ಸಮಿತಿಗಳನ್ನು ಒಳಗೊಳ್ಳುತ್ತದೆ.

3. **ಮೇಲ್ವಿಚಾರಣಾ ಸಮಿತಿ**.- (1) ಪ್ರತಿಯೊಂದು ಗ್ರಾಮ ಪಂಚಾಯತಿಯು, ಗ್ರಾಮ ಪಂಚಾಯತಿಯಲ್ಲಿ ಅನುಷ್ಠಾನಗೊಳ್ಳುವ ಕೇಂದ್ರ, ರಾಜ್ಯ ಮತ್ತು ಜಿಲ್ಲಾ ವಲಯದ ಎಲ್ಲಾ ಸರ್ಕಾರಿ ಕಾರ್ಯಕ್ರಮ ಮತ್ತು ಯೋಜನೆಗಳನ್ನು ಅನುಷ್ಠಾನಕ್ಕೆ ತರುವಲ್ಲಿ ಮತ್ತು ಎಲ್ಲಾ ರೀತಿಯ ಆರ್ಥಿಕ, ಸಾಮಾಜಿಕ, ಸಾಂಸ್ಕೃತಿಕ ಮತ್ತು ಪರಿಸರ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ತರುವಲ್ಲಿ ಮೇಲ್ವಿಚಾರಣೆ ನಡೆಸಲು ಈ ಕೆಳಕಂಡ ಮೇಲ್ವಿಚಾರಣಾ ಸಮಿತಿಯನ್ನು ರಚಿಸತಕ್ಕದ್ದು. ಅಂದರೆ,-

| | | |
|---|---|---|
| 1. | ಗ್ರಾಮ ಪಂಚಾಯತಿಯ ಅಧ್ಯಕ್ಷರು | – ಅಧ್ಯಕ್ಷರು |
| 2. | ಸಾಮಾನ್ಯ ಸ್ಥಾಯಿ ಸಮಿತಿಯ ಅಧ್ಯಕ್ಷರು. | – ಸದಸ್ಯರು |
| 3. | ಸಾಮಾಜಿಕ ನ್ಯಾಯ ಸಮಿತಿಯ ಅಧ್ಯಕ್ಷರು | – ಸದಸ್ಯರು |
| 4. | ಪಂಚಾಯತಿ ಪ್ರದೇಶದಲ್ಲಿಯ ಸಹಕಾರ ಸಂಘಗಳ ಪ್ರತಿನಿಧಿ | – ಸದಸ್ಯರು |
| 5. | ರೈತರ ಕ್ಲಬ್‌ಗಳ ಮಹಿಳಾ ಮಂಡಲಗಳ ಯುವಮಂಡಲಗಳ ಪ್ರತಿನಿಧಿಗಳು | – ಸದಸ್ಯರು |
| 6. | ಸ್ವ-ಸಹಾಯ ಸಂಘಗಳ ಗುಂಪಿನ ಪ್ರತಿನಿಧಿಗಳು | – ಸದಸ್ಯರು |

(2) ಸಂಬಂಧಿಸಿದ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಮೇಲ್ವಿಚಾರಣಾ ಸಮಿತಿಯ ಕಾರ್ಯದರ್ಶಿಯಾಗಿರತಕ್ಕದ್ದು.

4. **ಮೇಲ್ವಿಚಾರಣಾ ಸಮಿತಿಯ ಪ್ರಕಾರ್ಯಗಳು**.- (1) ಮೇಲ್ವಿಚಾರಣಾ ಸಮಿತಿಯು ಪ್ರತಿ ತಿಂಗಳು ಸಭೆ ಸೇರಿ ಪಂಚಾಯತಿ ಪ್ರದೇಶದಲ್ಲಿ ಅನುಷ್ಠಾನಗೊಳ್ಳಬೇಕಾದ ಕೇಂದ್ರ, ರಾಜ್ಯ ಮತ್ತು ಜಿಲ್ಲಾ ವಲಯದ ಎಲ್ಲಾ ಸರ್ಕಾರಿ ಕಾರ್ಯಕ್ರಮ ಮತ್ತು ಯೋಜನೆಗಳಿಗೆ ಸಂಬಂಧಿಸಿದಂತೆ ಮಂಜೂರು ಮಾಡಲಾದ ಅನುದಾನ, ಯೋಜನೆಗಳ ಪ್ರಗತಿ ಮತ್ತು ಯೋಜನೆಗಳ ಮೌಲ್ಯಮಾಪನವನ್ನು ಮಾಡತಕ್ಕದ್ದು. ಯೋಜನೆಗಳ ಅನುಷ್ಠಾನದ ಫಲಾನುಭವಿಗಳು ಮತ್ತು ಯೋಜನೆಗಳ ಅನುಷ್ಠಾನದಲ್ಲಿ ನಾಗರೀಕರಿಂದ ಸ್ವೀಕೃತವಾದ ಆಕ್ಷೇಪಣೆ, ಸಲಹೆಗಳು, ಮುಂತಾದವುಗಳನ್ನು ಪರಿಶೀಲಿಸಿ ಲೋಪದೋಷಗಳನ್ನು ನಿವಾರಿಸಲು ಕ್ರಮ ತೆಗೆದುಕೊಳ್ಳತಕ್ಕದ್ದು. ಅವಶ್ಯವಿದ್ದಲ್ಲಿ ಈ ಯೋಜನೆಗಳಿಗೆ ಸಂಬಂಧಿಸಿದ ರೂಪು ರೇಷುಗಳನ್ನು ಗ್ರಾಮ ಸಭೆಯಲ್ಲಿಟ್ಟು ಅವುಗಳ

(2) (2) ನೇ ನಿಯಮದಲ್ಲಿ "ಸಹಾಯಕ ನಿಯಂತ್ರಕರು" ಎಂಬ ಪದಗಳಿಗೆ "ಜಂಟಿ ನಿರ್ದೇಶಕರು / ಹಿರಿಯ ಉಪ ನಿರ್ದೇಶಕರು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

4. **ನಿಯಮ 109ರ ತಿದ್ದುಪಡಿ:-** ಮೂಲ ನಿಯಮಗಳ, 109ನೇ ನಿಯಮದ (5)ನೇ ಉಪನಿಯಮದಲ್ಲಿ "ಸಹಾಯಕ ನಿಯಂತ್ರಕರು" ಎಂಬ ಪದಗಳಿಗೆ "ಜಂಟಿ ನಿರ್ದೇಶಕರು / ಹಿರಿಯ ಉಪ ನಿರ್ದೇಶಕರು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

5. **ನಿಯಮ 111ರ ತಿದ್ದುಪಡಿ:-** ಮೂಲ ನಿಯಮಗಳ, 111ನೇ ನಿಯಮದಲ್ಲಿ "ನಿಯಂತ್ರಕರು, ರಾಜ್ಯ ಲೆಕ್ಕ ಪತ್ರ ಇಲಾಖೆ" ಎಂಬ ಪದಗಳಿಗೆ "ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ," ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

6. **ನಿಯಮ 112ರ ತಿದ್ದುಪಡಿ:-** ಮೂಲ ನಿಯಮಗಳ, 112ನೇ ನಿಯಮದಲ್ಲಿ;-

(1) (1)ನೇ ಉಪ ನಿಯಮದಲ್ಲಿ "ನಿಯಂತ್ರಕರು, ರಾಜ್ಯ ಲೆಕ್ಕ ಪತ್ರ ಇಲಾಖೆ," ಎಂಬ ಪದಗಳಿಗೆ "ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ" ಎಂಬ ಪದಗಳನ್ನು "ಸಹಾಯಕ ನಿಯಂತ್ರಕರು" ಎಂಬ ಪದಗಳಿಗೆ "ಜಂಟಿ ನಿರ್ದೇಶಕರು / ಹಿರಿಯ ಉಪ ನಿರ್ದೇಶಕರು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

(2) (2)ನೇ ಉಪ ನಿಯಮದಲ್ಲಿ "ಸಹಾಯಕ ನಿಯಂತ್ರಕರು" ಎಂಬ ಪದಗಳಿಗೆ "ಜಂಟಿ ನಿರ್ದೇಶಕರು / ಹಿರಿಯ ಉಪ ನಿರ್ದೇಶಕರು", ಎಂಬ ಪದಗಳನ್ನು ಮತ್ತು "ನಿಯಂತ್ರಕರು, ರಾಜ್ಯ ಲೆಕ್ಕ ಪತ್ರ ಇಲಾಖೆ" ಎಂಬ ಪದಗಳಿಗೆ "ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

7. **ನಿಯಮ 113ರ ತಿದ್ದುಪಡಿ:-** ಮೂಲ ನಿಯಮಗಳ, 113 ನೇ ನಿಯಮದಲ್ಲಿ "ಸಹಾಯಕ ನಿಯಂತ್ರಕರು" ಎಂಬ ಪದಗಳಿಗೆ "ಜಂಟಿ ನಿರ್ದೇಶಕರು / ಹಿರಿಯ ಉಪ ನಿರ್ದೇಶಕರು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

8. **ನಿಯಮ 115ರ ತಿದ್ದುಪಡಿ:-** ಮೂಲ ನಿಯಮಗಳ, 115 ನೇ ನಿಯಮದಲ್ಲಿ "ನಿಯಂತ್ರಕರು, ರಾಜ್ಯ ಲೆಕ್ಕ ಪತ್ರ ಇಲಾಖೆ" ಎಂಬ ಪದಗಳಿಗೆ "ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

PR – 596
SC - 100

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
**ಮುಬಾರಕ್ ಅಹ್ಮದ್**
ಉಪ ನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ : ಗ್ರಾಅಪ 893 ಗ್ರಾಪಂಅ 2016, ಬೆಂಗಳೂರು, ದಿನಾಂಕ : 06-06-2018.**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ ಪ್ರಕರಣ 209 ರೊಂದಿಗೆ ಓದಿಕೊಂಡಂತೆ ಪ್ರಕರಣ 311 ರಲ್ಲಿ ಅಗತ್ಯಪಡಿಸಲಾದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ನಿಯಮಗಳು 2017ರ ಕರಡನ್ನು ದಿನಾಂಕ:25-05-2017 ರ ಕರ್ನಾಟಕ ರಾಜ್ಯ ಪತ್ರದ ಭಾಗ-IV-A ರಲ್ಲಿ ಪ್ರಕಟಿಸಿ, ಅದರಿಂದ ಬಾಧಿತರಾಗುವ ವ್ಯಕ್ತಿಗಳಿಂದ ಸದರಿ ಕರಡಿಗೆ ಆಕ್ಷೇಪಣೆ ಮತ್ತು ಸಲಹೆಗಳನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಸಲ್ಲಿಸಬೇಕೆಂದು ಕೋರಿರುವುದರಿಂದ;

ಮತ್ತು ಸದರಿ ರಾಜ್ಯ ಪತ್ರವು ಸಾರ್ವಜನಿಕರಿಗೆ ದಿನಾಂಕ:25-05-2017 ರಂದು ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು ಸದರಿ ಕರಡಿನ ಸಂಬಂಧದಲ್ಲಿ ರಾಜ್ಯ ಸರ್ಕಾರಕ್ಕೆ ಯಾವುದೇ ಆಕ್ಷೇಪಣೆ ಅಥವಾ ಸಲಹೆಗಳ ಬಾರದಿರುವುದರಿಂದ;

ಈಗ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ 311 ನೇ ಪ್ರಕರಣದೊಂದಿಗೆ ಓದಲಾದಂತೆ ಸದರಿ ಅಧಿನಿಯಮದ ಪ್ರಕರಣ 209ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಮೂಲಕ ನಿಯಮಗಳನ್ನು ರಚಿಸುತ್ತದೆ, ಎಂದರೆ;-

### ನಿಯಮಗಳು

1. **ಹೆಸರು ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ನಿಯಮಗಳು 2017 ಎಂದು ಕರೆಯತಕ್ಕದ್ದು.

(2)ಈ ನಿಯಮಗಳು ಕರ್ನಾಟಕ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟಿತವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ನಿಯಮ 1ರ ತಿದ್ದುಪಡಿ.-** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) ನಿಯಮಗಳು, 1996 ರ (ಇಲ್ಲಿ ಇನ್ನು ಮುಂದೆ ಮೂಲ ನಿಯಮಗಳೆಂದು ಉಲ್ಲೇಖಿತವಾಗಿದೆ) ರ ನಿಯಮ 1 ರ, ಖಂಡ (1) ರಲ್ಲಿ "ಕರ್ನಾಟಕ ಪಂಚಾಯತ್ ರಾಜ್" ಎಂಬ ಪದಗಳಿಗೆ "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

3. **ನಿಯಮ 2ರ ತಿದ್ದುಪಡಿ.-** ಮೂಲ ನಿಯಮಗಳ, ನಿಯಮ 2ರಲ್ಲಿ, ಖಂಡ (1) ಕ್ಕೆ ಈ ಕೆಳಕಂಡಂತೆ ಪ್ರತಿಯೋಜಿಸತಕ್ಕದ್ದು, ಅಂದರೆ:-

"(1)" ಅಧಿನಿಯಮ" ಎಂದರೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993" (1993 ರ ಕರ್ನಾಟಕ ಅಧಿನಿಯಮ 14)